# ವಿಶೇಷ ಪತ್ರಿಕೆ

| ಭಾಗ – I | ಬೆಂಗಳೂರು, ಶನಿವಾರ, ನವೆಂಬರ್ ೨೧, ೨೦೦೯ (ಕಾರ್ತೀಕ ೩೦, ಶಕ ವರ್ಷ ೧೯೩೧) | ನಂ. ೧೦೫೯ |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

## ಕಂದಾಯ ಸಚಿವಾಲಯ

**ವಿಷಯ :** ಸರ್ಕಾರಿ ಜಮೀನು ಸಂರಕ್ಷಣಾ ಕಾರ್ಯಪಡೆ ರಚಿಸುವ ಬಗ್ಗೆ.

**ಪ್ರಸ್ತಾವನೆ :**

ಬೆಂಗಳೂರು ನಗರ ಮತ್ತು ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಜಮೀನು ಒತ್ತುವರಿ ಬಗ್ಗೆ ಸಮಗ್ರ ತನಿಖೆ ನಡೆಸಿ ಶ್ರೀ ಎ.ಟಿ. ರಾಮಸ್ವಾಮಿ ರವರ ಅಧ್ಯಕ್ಷತೆಯಲ್ಲಿ ರಚನೆಯಾಗಿದ್ದ ಜಂಟಿ ಸದನ ಸಮಿತಿಯು ಸರ್ಕಾರಿ ಜಮೀನು ಒತ್ತುವರಿ ಬಗ್ಗೆ ಮಾಹಿತಿ ಸಂಗ್ರಹಿಸಿ ವರದಿಯನ್ನು ನೀಡಿರುತ್ತದೆ. ಈ ಬಗ್ಗೆ ಇತ್ತೀಚಿನ ವಿಧಾನ ಮಂಡಲದ ಅಧಿವೇಶನದಲ್ಲಿ ಚರ್ಚೆಗೆ ಬಂದಿದ್ದು, ಮಾನ್ಯ ಮುಖ್ಯಮಂತ್ರಿಯವರು ದಿ : 27.07.2009 ಮತ್ತು 28.07.2009 ರಂದು ವಿಧಾನ ಮಂಡಲದ ಉಭಯ ಸದನಗಳಲ್ಲಿ ಸದರಿ ಜಂಟಿ ಸದನ ಸಮಿತಿಯು ನೀಡಿರುವ ವರದಿಯನ್ನು ಅನುಷ್ಠಾನಗೊಳಿಸುವ ಬಗ್ಗೆ ಶ್ರೀ ವಿ. ಬಾಲಸುಬ್ರಮಣ್ಯನ್, ಭಾ.ಆ.ಸೇ., (ನಿವೃತ್ತ) ಇವರ ಅಧ್ಯಕ್ಷತೆಯಲ್ಲಿ ಸರ್ಕಾರಿ ಜಮೀನು ಸಂರಕ್ಷಣಾ ಪಡೆ ರಚಿಸಲು ಕ್ರಮ ತೆಗೆದುಕೊಳ್ಳಲಾಗುವುದೆಂದು ತಿಳಿಸಿರುತ್ತಾರೆ.

ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಕಂದಾಯ ಇಲಾಖೆಗೆ ಸೇರಿದ 33,877 ಎಕರೆ ಹಾಗೂ ಇತರೆ 14 ಇಲಾಖೆಗಳು ಮತ್ತು ಶಾಸನಾತ್ಮಕ ಸಂಸ್ಥೆಗಳು ಮತ್ತು ಮಂಡಳಿಗಳಿಗೆ ಸೇರಿದ 7426.03 ಎಕರೆ ಸೇರಿದಂತೆ ಒಟ್ಟು ವಿಸ್ತೀರ್ಣ 41,303.03 ಎಕರೆ ಜಮೀನು ಒತ್ತುವರಿಯಾಗಿರುವುದನ್ನು ತೆರವುಗೊಳಿಸುವ ಮತ್ತು ಸಂರಕ್ಷಿಸುವ ಅಗತ್ಯವಿರುತ್ತದೆ. ಅದೇ ರೀತಿ ರಾಜ್ಯಾದ್ಯಂತ ಸರ್ಕಾರಿ ಇಲಾಖೆಗಳ ಮತ್ತು ಇತರೆ ಶಾಸನಾತ್ಮಕ ಸಂಸ್ಥೆಗಳು ಮತ್ತು ಮಂಡಳಿಗಳಿಗೆ ಸೇರಿದ ಜಮೀನಿನ ಒತ್ತುವರಿಯನ್ನು ಸಹ ಗುರುತಿಸಿ ತೆರವುಗೊಳಿಸಿ ಸಂರಕ್ಷಿಸುವ ಅಗತ್ಯವಿರುತ್ತದೆ. ಆದ್ದರಿಂದ ಮಾನ್ಯ ಮುಖ್ಯಮಂತ್ರಿಯವರು ಸದನದಲ್ಲಿ ನೀಡಿರುವ ಹೇಳಿಕೆಯಂತೆ ಸರ್ಕಾರಿ ಜಮೀನು ಸಂರಕ್ಷಣಾ ಪಡೆ ರಚಿಸಲು ಸರ್ಕಾರವು ಪರಿಶೀಲಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಆರ್‌ಡಿ 556 ಎಲ್‌ಜಿಬಿ 2009, ಬೆಂಗಳೂರು, ದಿನಾಂಕ : 19/ 09/ 2009**

ಬೆಂಗಳೂರು ನಗರ ಜಿಲ್ಲೆ ಮತ್ತು ಭವಿಷ್ಯದಲ್ಲಿ ರಾಜ್ಯಾದ್ಯಂತ ಇರುವ ಸರ್ಕಾರಿ ಜಮೀನುಗಳ ಸಮೀಕ್ಷೆ, ಒತ್ತುವರಿ ತೆರವುಗೊಳಿಸುವಿಕೆ ಮತ್ತು ಸಂರಕ್ಷಿಸುವುದು ಇತ್ಯಾದಿ ಕಾರ್ಯಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅಗತ್ಯ ನಿರ್ದೇಶನಗಳನ್ನು ನೀಡಲು ಮತ್ತು ಸರ್ಕಾರಿ ಜಮೀನಿನ ಸಂರಕ್ಷಣೆಯ ಮೇಲ್ವಿಚಾರಣೆ ಮತ್ತು ಉಸ್ತುವಾರಿಗಾಗಿ ಈ ಕೆಳಕಂಡ ಸದಸ್ಯರನ್ನು ಒಳಗೊಂಡ ಸರ್ಕಾರಿ ಜಮೀನು ಸಂರಕ್ಷಣಾ ಪಡೆಯನ್ನು ಈ ಕೂಡಲೇ ಜಾರಿಗೆ ಬರುವಂತೆ ರಚಿಸಲಾಗಿದೆ.

| | | | |
|---|---|---|---|
| 1. | ಶ್ರೀ ವಿ. ಬಾಲಸುಬ್ರಹ್ಮಣಿಯನ್, ಭಾ.ಆ.ಸೇ., (ನಿವೃತ್ತ) | – | ಅಧ್ಯಕ್ಷರು |
| 2. | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, | – | ಸದಸ್ಯರು |
| 3. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ | – | ಸದಸ್ಯರು |
| 4. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ | – | ಸದಸ್ಯರು |
| 5. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಣಕಾಸು ಇಲಾಖೆ | – | ಸದಸ್ಯರು |
| 6. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ | – | ಸದಸ್ಯರು |
| 7. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಇ–ಆಡಳಿತ ಇಲಾಖೆ | – | ಸದಸ್ಯರು |
| 8. | ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | – | ಸದಸ್ಯರು |
| 9. | ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ | – | ಸದಸ್ಯರು |
| 10. | ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ | – | ಸದಸ್ಯರು |
| 11. | ಆಯುಕ್ತರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ | – | ಸದಸ್ಯರು |
| 12. | ಆಯುಕ್ತರು, ನೋಂದಣಿ ಮತ್ತು ಮುದ್ರಾಂಕ ಇಲಾಖೆ | – | ಸದಸ್ಯರು |

| | | | |
|---|---|---|---|
| 13. | ಎ.ಡಿ.ಜಿ.ಪಿ., (ಕಾನೂನು ಮತ್ತು ಸುವ್ಯವಸ್ಥೆ) ಡಿ.ಜಿ.ಪಿ. ಕಛೇರಿ, ಬೆಂಗಳೂರು | – | ಸದಸ್ಯರು |
| 14. | ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು. | – | ಸದಸ್ಯರು |
| 15. | ವ್ಯವಸ್ಥಾಪಕ ನಿರ್ದೇಶಕರು, ಕೆರೆ ಅಭಿವೃದ್ಧಿ ಪ್ರಾಧಿಕಾರ | – | ಸದಸ್ಯರು |
| 16. | ಶ್ರೀ ಎಂ. ಆರ್. ಹೆಗಡೆ (ನಿವೃತ್ತ ಕಾನೂನು ಇಲಾಖಾ ಕಾರ್ಯದರ್ಶಿ) | – | ಕಾನೂನು ಸಲಹೆಗಾರರು |
| 17. | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ | – | ಸದಸ್ಯ ಕಾರ್ಯದರ್ಶಿ |

**ಕಾರ್ಯಪಡೆಯು ನಿರ್ವಹಿಸಬೇಕಾದ ಪ್ರಮುಖ ಕಾರ್ಯಗಳು ಈ ಕೆಳಕಂಡಂತಿವೆ**

1) ಸರ್ಕಾರಿ ಜಮೀನುಗಳ ಭೂ ಕಬಳಿಕೆ ಮತ್ತು ಅವ್ಯವಹಾರದ ಬಗ್ಗೆ ಜಂಟಿ ಸದನ ಸಮಿತಿ ಸಂಗ್ರಹಿಸಿದ ಮಾಹಿತಿಯನ್ವಯ ಸರ್ಕಾರಿ ಜಮೀನುಗಳ ಒತ್ತುವರಿ ತೆರವುಗೊಳಿಸಲು ಕಂದಾಯ ಇಲಾಖೆಗೆ, ಇತರೆ ಸರ್ಕಾರಿ ಇಲಾಖೆಗಳಿಗೆ ಮತ್ತು ಶಾಸನಬದ್ಧ ಸಂಸ್ಥೆಗಳು ಮತ್ತು ಮಂಡಳಿಗಳಿಗೆ ಅಗತ್ಯ ನಿರ್ದೇಶನ ನೀಡುವುದು ಹಾಗೂ ಈ ಕಾರ್ಯದಲ್ಲಿ ಸರ್ಕಾರದೊಂದಿಗೆ ಸಮನ್ವಯ ಕಾರ್ಯ ನಿರ್ವಹಿಸುವುದು.

2) ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಸರ್ಕಾರಿ ಭೂ ಕಬಳಿಕೆ ಗುರ್ತಿಸಿದ ಮಾದರಿಯಲ್ಲಿಯೇ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಕಂದಾಯ, ಇತರೆ ಸರ್ಕಾರಿ ಇಲಾಖೆಗಳ ಮತ್ತು ಶಾಸನಬದ್ಧ ಸಂಸ್ಥೆಗಳು / ಮಂಡಳಿಗಳ ಜಮೀನುಗಳ ಒತ್ತುವರಿಯನ್ನು ಗುರ್ತಿಸುವ, ತೆರವುಗೊಳಿಸುವ ಮತ್ತು ಸಂರಕ್ಷಿಸುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಕಾರ್ಯ ನಿರ್ವಹಿಸುವುದು.

3) ಭೂ ಕಬಳಿಕೆ ತೆರವುಗೊಳಿಸುವ ಪ್ರಕ್ರಿಯೆಯಲ್ಲಿ ಉಂಟಾಗಬಹುದಾದ ನ್ಯಾಯಾಲಯ ಪ್ರಕರಣಗಳು ಮತ್ತು ಕಾನೂನು ವಿಷಯಗಳಿಗೆ ಸಂಬಂಧಿಸಿದಂತೆ ಸರ್ಕಾರಿ ವಕೀಲರು ಮತ್ತು ವಿಶೇಷ ಸರ್ಕಾರಿ ವಕೀಲರುಗಳನ್ನು ನೇಮಿಸಿಕೊಳ್ಳುವ ಬಗ್ಗೆ ಇಲಾಖೆಗಳಿಗೆ ನಿರ್ದೇಶನ ನೀಡುವುದು ಮತ್ತು ಈ ಪ್ರಕ್ರಿಯೆ ಕಾರ್ಯಗತವಾಗಲು ಸರ್ಕಾರದ ಆದೇಶಗಳನ್ನು ಪಡೆದುಕೊಳ್ಳಲು ಸಮನ್ವಯ ಸಾಧಿಸುವುದು.

4) ಭೂ ಕಬಳಿಕೆಯಿಂದ ಮುಕ್ತಗೊಳಿಸಿದ ಸರ್ಕಾರಿ ಮತ್ತು ಇತರ ಶಾಸನಬದ್ಧ ಸಂಸ್ಥೆಗಳ ಮತ್ತು ಮಂಡಳಿಗಳ ಜಮೀನುಗಳ ಬಳಕೆ ಬಗ್ಗೆ ಹಾಗೂ ಅವಶ್ಯಕತೆ ಇರುವ ಸರ್ಕಾರಿ ಇಲಾಖೆ, ಶಾಸನಬದ್ಧ ಸಂಸ್ಥೆ / ಮಂಡಳಿಗಳಿಗೆ ಜಮೀನು ಮಂಜೂರಾತಿ ನೀಡುವ ಬಗ್ಗೆ ಸಲಹೆ ನೀಡುವುದು.

5) ಭೂ ಕಬಳಿಕೆ ಹೂಡಿದ ಮೊಕದ್ದಮೆಗಳ ಬಗ್ಗೆ ಮತ್ತು ವಿವಿಧ ನ್ಯಾಯಾಲಯಗಳಲ್ಲಿ ನಡೆದಿರುವ ಪ್ರಕರಣಗಳ ಬಗ್ಗೆ ಕಾಲ ಕಾಲಕ್ಕೆ ಪರಾಮರ್ಶೆ ಮಾಡುವುದು

6) ಸರ್ಕಾರಿ ಜಮೀನುಗಳ ಭೂ ಕಬಳಿಕೆಯಲ್ಲಿ ಶಾಮೀಲಾದ ಸರ್ಕಾರಿ ಅಧಿಕಾರಿಗಳು, ನೌಕರರು ಹಾಗೂ ಸಾರ್ವಜನಿಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆಗಳನ್ನು ಹೂಡುವ ಬಗ್ಗೆ ಸೂಚನೆ ನೀಡುವುದು ಮತ್ತು ಈ ಸಂಬಂಧದಲ್ಲಿ ಪರಾಮರ್ಶೆ ಸಭೆ ನಡೆಸುವುದು.

7) ಭವಿಷ್ಯದಲ್ಲಿ ಭೂ ಕಬಳಿಕೆ ತಡೆಯುವ ಬಗ್ಗೆ ಕೈಗೊಳ್ಳಬೇಕಾದ ಕಾನೂನು ಮತ್ತು ಇತರೆ ಕ್ರಮಗಳ ಬಗ್ಗೆ ಇಲಾಖೆಗಳಿಗೆ ನಿರ್ದೇಶನ ನೀಡುವುದು ಮತ್ತು ಸರ್ಕಾರದೊಂದಿಗೆ ಸಮನ್ವಯ ಸಾಧಿಸುವುದು.

8) ಕರ್ನಾಟಕ ಭೂ ಕಬಳಿಕೆ (ನಿಷೇಧ) ಕಾಯ್ದೆ, 2007ನ್ನು ಕಾರ್ಯರೂಪಕ್ಕೆ ತರುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವುದು.

9) ನೋಂದಣಿ ಇಲಾಖೆಯಲ್ಲಿ ದಾಖಲೆಗಳ ನೋಂದಣಿಗೆ ಸಂಬಂಧಪಟ್ಟಂತೆ "Torrens System of registration of title" ಪದ್ಧತಿಯನ್ನು ಕಾರ್ಯರೂಪಕ್ಕೆ ತರುವುದು.

10) ಬೆಂಗಳೂರು ನಗರ ಜಿಲ್ಲೆಯಲ್ಲಿ ಮತ್ತು ಇತರ ಜಿಲ್ಲೆಗಳಲ್ಲಿರುವ ಸರ್ಕಾರಿ ಜಮೀನುಗಳ ಬಳಕೆ ಬಗ್ಗೆ ಬೃಹತ್ ಯೋಜನೆ ಸಿದ್ಧಗೊಳಿಸುವುದು.

11) ಈಗಾಗಲೇ ಅಸ್ತಿತ್ವದಲ್ಲಿರುವ ಸಾರ್ವಜನಿಕ ಜಮೀನುಗಳ ನಿಗಮದ ಕಾರ್ಯನಿರ್ವಹಣೆಗೆ ಸಂಬಂಧಪಟ್ಟಂತೆ ಸಲಹೆ ಸೂಚನೆಗಳನ್ನು ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಇ. ಈಶ್ವರ ನಾಯಕ್**

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ (ಭೂ. ಮಂ.)